ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತಮೂರನೆಯ ಅಧಿವೇಶನ
ಸೋಮವಾರ, ದಿನಾಂಕ : 01 ನೇ ಫೆಬ್ರವರಿ, 2021

ಆರೋಗ್ಯ ಕೇಂದ್ರಗಳಲ್ಲಿ ವೈದ್ಯರು ಮತ್ತು ಅಗತ್ಯ ಸಿಬ್ಬಂದಿಗಳ ಬಗ್ಗೆ

ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

63 (69) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮಂಡ್ಯ ಜಿಲ್ಲೆಯ ವಿವಿಧ ತಾಲ್ಲೂಕುಗಳಲ್ಲಿ ಸ್ಥಾಪನೆ ಮಾಡಲಾಗಿರುವ ಪ್ರಾಥಮಿಕ ಆರೋಗ್ಯ ಕೇಂದ್ರಗಳು ಎಷ್ಟು; ಎಲ್ಲಾ ಆರೋಗ್ಯ ಕೇಂದ್ರಗಳಲ್ಲಿ ವೈದ್ಯರು ಮತ್ತು ಅಗತ್ಯ ಸಿಬ್ಬಂದಿಗಳು ಇದ್ದಾರೆಯೇ; ಇಲ್ಲದಿದ್ದಲ್ಲಿ, ಸರ್ಕಾರ ಯಾವ ಕ್ರಮ ಕೈಗೊಂಡಿದೆ; (ತಾಲ್ಲೂಕುವಾರು ಸಂಪೂರ್ಣ ವಿವರ ನೀಡುವುದು)

(ಆ) ನಾಗಮಂಗಲ ತಾಲ್ಲೂಕಿನ ಹೋಬಳಿ ಕೇಂದ್ರ ಸ್ಥಾನಗಳಾದ ದೇವಲಾಪುರ, ಹೊನಕೆರೆ/ಚೀಣ್ಯಗಳಲ್ಲಿರುವ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಮೇಲ್ದರ್ಜೆಗೇರಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

(ಇ) ಹಾಗಿದ್ದಲ್ಲಿ, ಈ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಮೇಲ್ದರ್ಜೆಗೇರಿಸಲು ಸರ್ಕಾರ ಅನುದಾನವನ್ನು ಮೀಸಲಿರಿಸಿದೆಯೇ; ಹೌದಾದಲ್ಲಿ, ಯಾವ ಕಾಲಿಮಿತಿಯಲ್ಲಿ ಈ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಮೇಲ್ದರ್ಜೆಗೇರಿಸಲಾಗುವುದು; ಇಲ್ಲದಿದ್ದಲ್ಲಿ, ಅದಕ್ಕೆ ಕಾರಣಗಳೇನು ?